# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 167 | Pages. 2 | Date: 08-05-2025, THURSDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 167 - ಪುಟಗಳು : 2 - 08 ಮೇ 2025 ಗುರುವಾರ Ph: 8762954248 ದರ : ₹1


# ಆಪರೇಷನ್ ಸಿಂದೂರ: ಪಹಲ್ಗಾಮ್ ದಾಳಿಗೆ ಪ್ರತ್ಯುತ್ತರ

## ಏರ್‌ಸ್ಟ್ರೈಕ್‌ಗೆ ಬೆಚ್ಚಿದ ಪಾಕಿಸ್ತಾನ | ಇಂಡಿಯನ್ ಆರ್ಮಿಗೆ ಭಾರತೀಯರ ಜೈಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನವದೆಹಲಿ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏ. 22 ರಂದು ನಡೆದ ಭಾರತೀಯ ಪ್ರವಾಸಿಗರ ಹತ್ಯಾಕಾಂಡಕ್ಕೆ ಪ್ರತೀಕರವಾಗಿ ಭಾರತೀಯ ಸೇನೆ ಮಂಗಳವಾರ ಮಧ್ಯರಾತ್ರಿ ಏರ್‌ಸ್ಟ್ರೈಕ್ ಮೂಲಕ ಪಾಕಿಸ್ತಾನಕ್ಕೆ ಶಾಕ್ ನೀಡಿದೆ. ಈ ಪ್ರಕ್ರಿಯೆಗೆ ಭಾರತ ಆಪರೇಷನ ಸಿಂಧೂರ ಎಂದು ಹೆಸರಿಟ್ಟಿದೆ.

ಮೇ 7 ರಂದು ದೇಶಾದ್ಯಂತ ಮಾಕ್ ಡ್ರಿಲ್‌ಗೆ ಸೂಚನೆ ನೀಡಿದ್ದ ಭಾರತೀಯ ಸೇನೆ ಏಕಾಏಕಿ ದಾಳಿ ನಡೆಸುವ ಮೂಲಕ ವಿಶ್ವವೇ ನಿಬ್ಬೆರಗಾಗುವಂತೆ ಮಾಡಿದೆ. ಒಂಬತ್ತು ಉಗ್ರರ ಶಿಬಿರಗಳನ್ನು ಗುರಿಯಾಗಿಸಿದ ಈ ದಾಳಿಯಲ್ಲಿ 80ಕ್ಕೂ ಹೆಚ್ಚು ಉಗ್ರರು ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

**ವನಿತೆಯರಿಗೆ ನಾಯಕತ್ವ**

ಆಪರೇಷನ್ ಸಿಂದೂರ ಕಾರ್ಯಾಚರಣೆಯ ವಿವರಗಳನ್ನು ಮಾಧ್ಯಮಗಳಿಗೆ ತಿಳಿಸಲು ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಅವರೊಂದಿಗೆ ರಕ್ಷಣಾ ಇಲಾಖೆಯ ಮಹಿಳಾ ಅಧಿಕಾರಿಗಳಾದ ಕರ್ನಲ್ ಸೋಫಿಯಾ ಖುರೇಷಿ ಮತ್ತು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಅವರನ್ನು ನಿಯೋಜಿಸುವ ಮೂಲಕ ಭಾರತವು ಪಾಕಿಸ್ತಾನದ ಉನ್ನತ ಮಿಲಿಟರಿ ಅಧಿಕಾರಿಗಳು ಪ್ರತಿಪಾದಿಸಿದ ಎರಡು ರಾಷ್ಟ್ರಸಿದ್ಧಾಂತಕ್ಕೆ ತಕ್ಕ ತಿರುಗೇಟು ನೀಡಿದೆ.

ಸಾಮಾನ್ಯವಾಗಿ ಇಂತಹ ಸೇನಾ ಕಾರ್ಯಾಚರಣೆಯ ವಿವರಗಳನ್ನು ರಕ್ಷಣಾ ಇಲಾಖೆ ಹಾಗೂ ಸೇನೆಯ ವಕ್ತಾರರು ನೀಡುತ್ತಾರೆ. ರಕ್ಷಣಾ ಇಲಾಖೆ ಹಾಗೂ ವಿದೇಶಾಂಗ ಇಲಾಖೆಯ ಪತ್ರಿಕಾಗೋಷ್ಠಿ ಬೆಳಿಗ್ಗೆ 10ಕ್ಕೆ ನಿಗದಿಯಾಗಿದೆ ಎಂದು ರಕ್ಷಣಾ ಇಲಾಖೆ ಪ್ರಕಟಿಸಿತ್ತು. ಆದರೆ, ಈ ಪತ್ರಿಕಾಗೋಷ್ಠಿಯಲ್ಲಿ ಭಾಗಿಯಾಗಿದ್ದು ಸೇನೆಯ ಹಿರಿಯ ಅಧಿಕಾರಿಗಳಲ್ಲ. ಬದಲಾಗಿ, ಇಬ್ಬರು ಮಹಿಳಾ ಅಧಿಕಾರಿಗಳು. ಇಬ್ಬರೂ ಏಕ ಕಂಠದಿಂದ ಸೇನಾ ಕಾರ್ಯಾಚರಣೆಯ ವಿವರಗಳನ್ನು ಜಗತ್ತಿಗೆ ಸಾರಿದರು.


ಪತ್ರಿಕಾಗೋಷ್ಠಿಗೆ ಮೂವರು ಸದಸ್ಯರ ತಂಡವನ್ನು ಮುನ್ನಡೆಸಿದ ಮಿಸ್ರಿ ಅವರು ಶ್ರೀನಗರದಲ್ಲಿ ಕಾಶ್ಮೀರಿ ಪಂಡಿತ ಕುಟುಂಬದಲ್ಲಿ ಜನಿಸಿದರು. ಅವರು 1989ರಲ್ಲಿ ಭಾರತೀಯ ವಿದೇಶಾಂಗ ಸೇವೆಗೆ ಸೇರಿದರು. ಭಾರತದ ಉಪ ರಾಷ್ಟ್ರೀಯ ಭದ್ರತಾ ಸಲಹೆಗಾರ ಮತ್ತು ಚೀನಾದಲ್ಲಿ ಭಾರತದ ರಾಯಭಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಮಿಸ್ರಿ ಅವರನ್ನು ವಿದೇಶಾಂಗ ಕಾರ್ಯದರ್ಶಿಯಾಗಿ 2024ರ ಜುಲೈನಲ್ಲಿ ನೇಮಿಸಲಾಗಿತ್ತು. ಅವರ ಅವಧಿಯನ್ನು ಡಿಸೆಂಬರ್‌ನಲ್ಲಿ ಒಂದು ವರ್ಷ ವಿಸ್ತರಿಸಲಾಯಿತು.

ಏ. 16ರಂದು ನಡೆದ ಸಮಾವೇಶವೊಂದರಲ್ಲಿ ಮಾತನಾಡಿದ್ದ ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸಿಮ್ ಮುನೀರ್, ಹಿಂದುಗಳು ಮತ್ತು ಮುಸ್ಲಿಮರು ವಿಭಿನ್ನ ರಾಷ್ಟ್ರಗಳು ಎಂದು ಹೇಳಿದ್ದರು. ಕಾಶ್ಮೀರವು ಪಾಕಿಸ್ತಾನದ ಭಾಗ ಎಂದು ಪುನರುಚ್ಚರಿಸಿದ್ದರು.

ತನ್ನ ನೆಲದಲ್ಲಿ ಭಾರತ ನಡೆಸಿದ ಕಾರ್ಯಾಚರಣೆಗಳಿಗೆ ಪ್ರತಿಕ್ರಿಯಿಸಲು ಪಾಕಿಸ್ತಾನ ಇಬ್ಬರು ಜನರಲ್‌ಗಳನ್ನು ನಿಯೋಜಿಸಿತು. ಆದರೆ, ಭಾರತ ಇದಕ್ಕಿಂತ ಭಿನ್ನ ನಡೆ ಇಟ್ಟಿತು. ಕಾರ್ಯಾಚರಣೆಯ ವಿವರ ನೀಡುವ ಹೊಣೆಯನ್ನು ರಕ್ಷಣಾ ಇಲಾಖೆಯ ಇಬ್ಬರು ಮಹಿಳಾ ಅಧಿಕಾರಿಗಳಿಗೆ ನೀಡಿತು. ಕರ್ನಲ್ ಖುರೇಷಿ ಅವರು ಕೋರ್ ಆಫ್ ಸಿಗ್ನಲ್‌ನ (ಮಿಲಿಟರಿ ಸಂವಹನ) ಮೊದಲ ಮಹಿಳಾ ಅಧಿಕಾರಿ. 2006ರಲ್ಲಿ ಕಾಂಗೋದಲ್ಲಿ ನಡೆದ ಭಾರತದ ಕಾರ್ಯಾಚರಣೆ ಸೇರಿದಂತೆ ಅಂತರರಾಷ್ಟ್ರೀಯ ಶಾಂತಿಪಾಲನಾ ಕಾರ್ಯಾಚರಣೆಯಲ್ಲಿ ಅವರು ದೀರ್ಘ ಅನುಭವ ಹೊಂದಿದ್ದಾರೆ.

ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಅವರು 2,500 ಗಂಟೆಗಳಿಗೂ ಹೆಚ್ಚು ಹಾರಾಟದ ಅನುಭವ ಹೊಂದಿರುವ ಭಾರತೀಯ ವಾಯುಪಡೆಯ ಹೆಲಿಕಾಪ್ಟರ್ ಪೈಲಟ್ ಆಗಿದ್ದಾರೆ. ಅವರು ಪ್ರಮುಖ ರಕ್ಷಣಾ ಕಾರ್ಯಾಚರಣೆಗಳನ್ನು ಮುನ್ನಡೆಸಿದ್ದಾರೆ. ಪ್ರಸ್ತುತ ದೆಹಲಿಯ ವಾಯುಪಡೆಯ ಪ್ರಧಾನ ಕಚೇರಿಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸಣ್ಣ ವಯಸ್ಸಿನಲ್ಲೇ ಸೇನೆ ಸೇರಬೇಕೆಂದು ಕನಸು ಕಂಡವರು ಅವರು.



### ಪ್ರತಿದಾಳಿಗೆ ಭಾರತ ಸನ್ನದ್ಧ

ಉಗ್ರರ ಕ್ಯಾಂಪ್‌ಗಳನ್ನು ಗುರಿಯಾಗಿಸಿಕೊಂಡು ನಡೆಸಿದ ಆಪರೇಷನ್ ಸಿಂಧೂರಕ್ಕೆ ಪ್ರತಿಯಾಗಿ ಪಾಕಿಸ್ತಾನ ಭಾರತದ ಮೇಲೆ ದಾಳಿಗೆ ಮುಂದಾದರೆ ಅದನ್ನು ಎದುರಿಸಲು ಭಾರತ ಸರ್ವ ರೀತಿಯಲ್ಲೂ ಸನ್ನದ್ಧವಾಗಿದೆ ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಹೇಳಿದ್ದಾರೆ.

ಆಪರೇಷನ್ ಸಿಂದೂರನ ವಿವರಗಳನ್ನು ಹಂಚಿಕೊಳ್ಳಲು ಪ್ರಮುಖ ರಾಷ್ಟ್ರಗಳ ಭದ್ರತಾ ಸಲಹೆಗಾರರ ಜೊತೆ ಮಾತುಕತೆ ಅವರು ನಡೆಸಿದ್ದಾರೆ. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ, ಯುಕೆ ಎನ್ ಎಸ್ಎ ಜೊನಾಥನ್ ಪೊವೆಲ್, ಸೌದಿ ಎನ್‌ಎಸ್ಎ ಮುಸೈದ್ ಅಲ್ ಐಬನ್, ಯುಎಇ ಎನ್‌ಎಸ್ಎ ಶೇಖ್ ತಹ್ನೂನ್, ಯುಎಇಯ ರಾಷ್ಟ್ರೀಯ ಭದ್ರತಾ ಮಂಡಳಿಯ ಪ್ರಧಾನ ಕಾರ್ಯದರ್ಶಿ ಅಲಿ ಅಲ್ ಶಮ್ಸಿ ಮತ್ತು ಜಪಾನ್‌ನ ಎನ್‌ಎಸ್ಎ ಮಸಟಕ ಒಕಾನೊ ಸೇರಿ ಉನ್ನತ ಭದ್ರತಾ ಅಧಿಕಾರಿಗಳೊಂದಿಗೆ ಅಜಿತ್ ದೋವಲ್ ದೂರವಾಣಿ ಸಂಭಾಷಣೆ ನಡೆಸಿದ್ದಾರೆ.

### ಸಿಎಂ ಸಿದ್ದರಾಮಯ್ಯ ಸ್ವಾಗತ



ಬೆಂಗಳೂರು: ದೇಶದ ಸೇನಾ ಪಡೆ ಆಪರೇಷನ್ ಸಿಂದೂರ ಹೆಸರಿನಲ್ಲಿ ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿರುವ ಒಂಬತ್ತು ಉಗ್ರಗಾಮಿಗಳ ನೆಲೆಗಳನ್ನು ನಾಶಗೊಳಿಸಿ ಪರಾಕ್ರಮ ಮೆರೆದಿದೆ. ಇದು ಪಾಕಿಸ್ತಾನಕ್ಕೆ ಎಚ್ಚರಿಕೆಯ ಗಂಟೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ತಮ್ಮ ಸರ್ಕಾರಿ ನಿವಾಸ ಕಾವೇರಿಯಲ್ಲಿ ಬುಧವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ನೀತಿ ವಿರುದ್ಧ ಪ್ರತಿಭಟನೆ ನಡೆಸುವುದು ಸಮಂಜಸವಲ್ಲ ಎಂಬ ಕಾರಣಕ್ಕೆ ರಾಯಚೂರಿನಲ್ಲಿ ಪಕ್ಷದ ವತಿಯಿಂದ ಬುಧವಾರ ಹಮ್ಮಿಕೊಂಡಿದ್ದ ಪ್ರತಿಭಟನೆಯನ್ನು ರದ್ದುಗೊಳಿಸಲಾಗಿದೆ ಎಂದರು.

ಪಾಕಿಸ್ತಾನಕ್ಕೆ ಮಾತ್ರವಲ್ಲ ಭಾರತದ ಜೊತೆ ಕಿಡಿಗೇಡಿತನ ನಡೆಸುವ ನೆರೆಯ ಎಲ್ಲಾ ದೇಶಗಳಿಗೂ ಈ ಸೇನಾ ದಾಳಿ ಎಚ್ಚರಿಕೆಯ ಗಂಟೆ. ರಾಷ್ಟ್ರೀಯ ಭದ್ರತೆ ವಿಷಯಲ್ಲಿ ಯಾವುದೇ ರಾಜಿ ಸಾಧ್ಯವಿಲ್ಲ. ಈ ದಾಳಿಯನ್ನು ಎಲ್ಲರೂ ಬೆಂಬಲಿಸಿದ್ದೇವೆ. ನಮ್ಮ ಸರ್ಕಾರ ನೂರಕ್ಕೆ ನೂರರಷ್ಟು ಸೇನೆ ಕೈಗೊಂಡಿರುವ ಕ್ರಮವನ್ನು ಬೆಂಬಲಿಸುತ್ತದೆ. ರಾಜ್ಯದಲ್ಲಿ ಸುರಕ್ಷತೆಯ ಕುರಿತು ಎಲ್ಲಾ ಎಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.

ರಾಜ್ಯದ ಭದ್ರತಾ ವ್ಯವಸ್ಥೆ ಮೇಲೆ ನಿಗಾ ಇಡುವಂತೆ ಪೊಲೀಸ್ ವರಿಷ್ಠರಿಗೆ ಸೂಚನೆ ನೀಡಿದ್ದೇನೆ. ನಮ್ಮ ಸರ್ಕಾರ ಕೇಂದ್ರ ಸರ್ಕಾರದ ಜೊತೆಯಲ್ಲಿಯೂ ಸಂಪರ್ಕದಲ್ಲಿರುತ್ತದೆ. ಅಲ್ಲಿಂದ ಬರುವ ಸೂಚನೆಗಳನ್ನು ಪಾಲಿಸಲಾಗುತ್ತದೆ. ಯಾರೂ ಭಯಭೀತರಾಗುವ ಅವಶ್ಯಕತೆ ಇಲ್ಲ. ಕಟ್ಟುನಿಟ್ಟಿನ ಕ್ರಮಗಳೊಂದಿಗೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡಲಾಗುವುದು ಎಂದರು.

# ಹೊಯ್ಸಳ ಅರಸರಿಗೆ ಪುಷ್ಪಗಿರಿ ಮಠ ಮಾರ್ಗದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಬೇಲೂರು: ಪುಷ್ಪಗಿರಿ ಮಠಕ್ಕೆ ತನ್ನದೇಯಾದ ಇತಿಹಾಸವಿದ್ದು ಹೊಯ್ಸಳರ ಕಾಲದ ಅರಸರು ಶ್ರೀಮಠಕ್ಕೆ ಬಂದು ಮಾರ್ಗದರ್ಶನ ಪಡೆಯುತ್ತಿದ್ದರು ಎಂದು ಶ್ರೀ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಚಿಲ್ಕೂರು ಮಠದಲ್ಲಿ ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಅವರು ನಿರ್ಮಿಸಿರುವ ಲಿಂಗೈಕ್ಯ ಶ್ರೀಗಳ ಗದ್ದುಗೆಯನ್ನು ಬುಧವಾರ ಲೋಕಾರ್ಪಣೆಗೊಳಿಸಿ ಮಾತನಾಡಿದರು. ಪುಷ್ಪಗಿರಿ ಮಹಾ ಸಂಸ್ಥಾನ ಮಠಕ್ಕೆ ತನ್ನದೇಯಾದ ಇತಿಹಾಸವಿದೆ. ಹೊಯ್ಸಳರ ಕಾಲದಲ್ಲಿ ಅರಸರು ಪುಷ್ಪಗಿರಿಗಳ ಮಾರ್ಗದರ್ಶನ ಪಡೆಯುತ್ತಿದ್ದರು ಎಂಬ ಐತಿಹ್ಯವಿದೆ. ಇಂತಹ ಪರಂಪರೆಯಲ್ಲಿ ಬಂದ ಚಿಲ್ಕೂರು ಮಠಕ್ಕೆ ಸೇವೆಯನ್ನು ಸಲ್ಲಿಸಿ ಸಮಾಜಕ್ಕೆ ಕೊಡುಗೆ ನೀಡಿದ ಐದು ಮಂದಿ ಲಿಂಗೈಕ್ಯ ಶ್ರೀಗಳ ಗದ್ದುಗೆ ನವೀಕರಣ ಮಾಡಿರುವುದು ಒಳ್ಳೆಯ ಬೆಳವಣಿಗೆ. ಚೌಕಿ ಮಠದ ಗದ್ದುಗೆಗೆ ಉದ್ಯಮಿ ಗ್ರಾನೈಟ್ ರಾಜಶೇಖರ್ ಕಾಯಕಲ್ಪ ಕಲ್ಪಿಸಿದ್ದಾರೆ. ಉಳಿದ ನಾಲ್ಕು ಗದ್ದುಗೆಗಳಿಗೆ ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ನೆರವು ನೀಡಿದ್ದು ಶ್ಲಾಘನೀಯ ಎಂದು ಹೇಳಿದರು.

ಚಿಲ್ಕೂರು ಮಠಕ್ಕೆ ಸ್ವಾಮೀಜಿಗಳಾಗಿ ಸೇವೆ ಸಲ್ಲಿಸಿದ ಶ್ರೀ ಬಸವರಾಜ ಸ್ವಾಮೀಜಿ, ಶ್ರೀ ಚನ್ನಬಸವ ಸ್ವಾಮೀಜಿ, ಶ್ರೀ ಇಮ್ಮಡಿ ಬಸವರಾಜೇಂದ್ರ ಸ್ವಾಮೀಜಿ, ಶ್ರೀ ಬಸವರಾಜೇಂದ್ರ ಸ್ವಾಮೀಜಿ ಅವರ ಗದ್ದುಗೆಗೆ ಯಾವುದೇ ರಕ್ಷಣೆ ಇಲ್ಲದನ್ನು ಕಂಡ ಗ್ರಾಮಸ್ಥರು ಕಾಯಕಲ್ಪ ನೀಡಬೇಕೆಂದು ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಅವರಿಗೆ ಮನವಿ ಸಲ್ಲಿಸಿದ್ದರು. ಶಾಸಕರ ಕ್ಷೇತ್ರ ಅಭಿವೃದ್ಧಿ ಯೋಜನೆಯಿಂದ 5 ಲಕ್ಷರೂ. ಅನುದಾನದ ಜೊತೆಗೆ ವೈಯಕ್ತಿಕ 25 ಲಕ್ಷ ರೂ.ಗಳಲ್ಲಿ ಗದ್ದುಗೆಗಳಿಗೆ ರಕ್ಷಣೆ ನೀಡುವ ಕಾಮಗಾರಿ ಕೈಗೊಳ್ಳಲಾಗಿತ್ತು.

ಚಿತ್ರದುರ್ಗ ಮಡಿವಾಳ ಮಾಚಿದೇವ ಮಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ, ಮಾಜಿ ಶಾಸಕ ಕೆ.ಎಸ್. ಲಿಂಗೇಶ್, ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ಬಲ್ಲೇನಹಳ್ಳಿ ರವಿಕುಮಾರ್, ಉದ್ಯಮಿ ಹೆಬ್ಬಾಳು ಸುಧಾಕರ್, ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಬ್ಬಾಳು ಹಾಲಪ್ಪ, ಗುತ್ತಿಗೆದಾರ ಶಿವಕುಮಾರ, ಶಿಕ್ಷಕ ರಾಜಕುಮಾರ್ , ಹಾಲಪ್ಪಯ್ಯ ಹುಲಿಕೆರೆ, ರಘು, ಹಾರೋಹಳ್ಳಿ ಪಾಪಣ್ಣ ಇತರರಿದ್ದರು.

# ಮೂಲ ಜಾತಿ ನಮೂದಿಸಲು ಮನವಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**





ಹಾಸನ: ಒಳ ಮೀಸಲಾತಿ ಜಾರಿಗಾಗಿ ನಿಖರ ದತ್ತಾಂಶ ಸಂಗ್ರಹಿಸಲು ಮನೆ ಮನೆ ಜನಗಣತಿಗೆ ಅಧಿಕಾರಿಗಳು ಬರುತ್ತಿದ್ದು, ಮೂಲ ಜಾತಿಯ ಹೆಸರನ್ನು ದಾಖಲಿಸುವ ಮೂಲಕ ಸಂವಿಧಾನದ ಪ್ರಕಾರ ಮೀಸಲಾತಿ ಸೌಲಭ್ಯ ಪಡೆಯಿರಿ ಎಂದು ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ ರಾಜ್ಯ ಪ್ರಧಾನ ಕಾರ್ಯದರ್ಶಿ ದೇವರಾಜು ಮನವಿ ಮಾಡಿದರು.

ಸುದ್ದಿಗೋಷ್ಟಿಯಲ್ಲಿ ಬುಧವಾರ ಮಾತನಾಡಿ, ಕರ್ನಾಟಕದಲ್ಲಿ ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ಜಾರಿಗಾಗಿ ನಿಖರ ದತ್ತಾಂಶ ಸಂಗ್ರಹಿಸಲು ನ್ಯಾ.ನಾಗಮೋಹನ ದಾಸ್ ಆಯೋಗದಿಂದ ಮೇ 5-17ರ ತನಕ ಜಾತಿ ಜನಗಣತಿ ಆರಂಭವಾಗಿದೆ. ಮೀಸಲಾತಿ ಸೌಲಭ್ಯ ಪಡೆಯಲು 101 ಪರಿಶಿಷ್ಟ ಜಾತಿಯವರೂ ಮೂಲ ಜಾತಿಗಳಾದ ಮಾದಿಗ, ಹೊಲೆಯ, ಸಮಗಾರ, ಡೋಹರ, ಮಚ್ಚೆಗಾರ, ಬೋವಿ, ಲಂಬಾಣಿ, ಕೊರಚ, ಕೊರಮ ಇತ್ಯಾದಿ ವಿವರವನ್ನು ಸ್ಪಷ್ಟವಾಗಿ ತಿಳಿಸಬೇಕೆಂದು ಕೋರಿದರು. ಆನ್‌ಲೈನ್ ನಲ್ಲಿ ಜಾತಿ ವಿವರ ನೀಡಬಯಸುವವರು ತಮ್ಮ ಆಧಾರ್ ಕಾರ್ಡ್‌ನೊಂದಿಗೆ ನಿಮ್ಮ ಜಾತಿ ಪ್ರಮಾಣ ಪತ್ರದ ಆರ್‌ಡಿ ನಂಬರನ್ನು ಅಪ್ ಲೋಡ್ ಮಾಡಬೇಕು. ಅತಿಮುಖ್ಯವಾಗಿ ಆದಿ ಕರ್ನಾಟಕ, ಆದಿದ್ರಾವಿಡ, ಆದಿ ಆಂಧ್ರ, ಹರಿಜನ ಎಂದು ಬರೆಸಬಾರದು ಎಂದ ಅವರು ಇದೇ ಕಾರಣಕ್ಕೆ ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿಯ ಎಲ್ಲಾ ಹಂತದ ಕಾರ್ಯಕರ್ತರು ಸಕ್ರಿಯವಾಗಿ ಭಾಗವಹಿಸಿ ಮೂಲ ಜಾತಿ ಬರೆಸುವಂತೆ ಜನರಲ್ಲಿ ಜಾಗೃತಿ ಮೂಡಿಸಲಿದ್ದಾರೆ ಎಂದರು.

ಮಾದಿಗ ದಂಡೋರ ಸಮಿತಿ ಜಿಲ್ಲಾಧ್ಯಕ್ಷ ಮತ್ತು ರಾಜ್ಯ ಪ್ರಧಾನ ಕಾರ್ಯದರ್ಶಿ ಟಿ.ಆರ್. ವಿಜಯಕುಮಾರ್ ಮಾತನಾಡಿ, ಚನ್ನರಾಯಪಟ್ಟಣದ ಅಗ್ರಹಾರ ಬೀದಿಯ ವಾರ್ಡ್ ಸಂಖ್ಯೆ 22 ರಲ್ಲಿ ಜಾತಿ ಗಣತಿ ಮಾಡುತ್ತಿರುವ ಬಿಎಲ್‌ಒ ಪ್ರಕಾಶ್ ಎಂಬುವರು ಒಂದು ರೇಷನ್ ಕಾರ್ಡ್‌ನಿಂದ ಇಬ್ಬರಷ್ಟೇ ನೋಂದಣಿ ಆಗೋದು ಎನ್ನುತ್ತಿದ್ದಾರೆ. ಅರಸೀಕೆರೆ ತಾಲೂಕು ತೊಂಡಿಗನಹಳ್ಳಿಯಲ್ಲಿ ಗಣತಿ ಮಾಡುತ್ತಿರುವ ಕೇಶವಮೂರ್ತಿ ಅವರು, ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಮತ್ತೊಂದೆಡೆ ಆಗತಾನೆ ಹುಟ್ಟಿದ ಮಗುವಿನ ಎಂಟ್ರಿ ತೆಗೆದುಕೊಳ್ಳುತ್ತಿಲ್ಲ. ಹೀಗಾಗಿ ಗಣತಿ ಮಾಡುತ್ತಿರುವವರಿಗೆ ಸರಿಯಾಗಿ ತರಬೇತಿ ನೀಡಬೇಕು, ತಪ್ಪು ಮಾಡುತ್ತಿರುವವರ ವಿರುದ್ಧ ಕ್ರಮ ಜರುಗಿಸಬೇಕು. ಈ ಸಂಬಂಧ ಡಿಸಿ ಅವರು ಸಂಬಂಧಪಟ್ಟವರಿಗೆ ಸ್ಪಷ್ಟ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು. ಗಣತಿಗಾಗಿಯೇ ರಚನೆಯಾಗಿರುವ ಆಯೋಗ ಮತ್ತು ಜಿಲ್ಲಾಡಳಿತ ಈ ಬಗ್ಗೆ ಗಂಭೀರ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ ಬೂತ್ ಅಧ್ಯಕ್ಷ ವೆಂಕಟೇಶ್, ಮಾದಿಗ ದಂಡೋರ ತಾಲೂಕು ಅಧ್ಯಕ್ಷ ಶಶಿಕುಮಾರ್, ನಾಗರಾಜು, ಪ್ರಧಾನ ಕಾರ್ಯದರ್ಶಿ ಸತೀಶ್, ದೇವರಾಜು ತಿರುಪತಿಹಳ್ಳಿ ಇತರರು ಉಪಸ್ಥಿತರಿದ್ದರು.

# ಉಗ್ರರ ದಮನಕ್ಕೆ ಬಿಜೆಪಿ ಸಂಭ್ರಮ




ಹಾಸನ: ಪಾಕಿಸ್ತಾನದ ಉಗ್ರರ ನೆಲೆ ಮೇಲೆ ಏರ್ ಸ್ಟ್ರೈಕ್ ದಾಳಿ ಮೂಲಕ ದುಷ್ಟರ ಸಂಹಾರ ಮಾಡಿದ ಭಾರತೀಯ ಸೇನೆ ಧೈರ್ಯ-ಸಾಹಸ, ಅದಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ಉತ್ತೇಜನ ಬೆಂಬಲಿಸಿ ನಗರದಲ್ಲಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು, ಬೇಲೂರು ಶಾಸಕ ಹೆಚ್.ಕೆ. ಸುರೇಶ್ ಅವರ ನೇತೃತ್ವದಲ್ಲಿ ಶಂಕರಮಠ ರಸ್ತೆಯಲ್ಲಿ ಪಟಾಕಿ ಸಿಡಿಸಿ ಸಂಭ್ರಮಿಸಿದರು. ಮೋದಿ, ಅಮಿತ್ ಶಾ ಪರ ಜೈಕಾರ ಕೂಗಿ ಸಂಭ್ರಮ ಆಚರಿಸಿದರು. ಪಾಕಿಸ್ತಾನಕ್ಕೆ ಮೊದಲೇ ಎಚ್ಚರಿಕೆ ನೀಡಲಾಗಿತ್ತು ಆದರೂ ಅವರು ಎಚ್ಚೆತ್ತುಕೊಳ್ಳಲಿಲ್ಲ. ಹಾಗಾಗಿಯೇ ಈಗ ಒಂದು ಸಾಂಪಲ್‌ನೀಡಲಾಗಿದೆ. ಇನ್ನಾದ್ರೂ ಪಾಕಿಸ್ತಾನ ಎಚ್ಚೆತ್ತುಕೊಳ್ಳಲಿ, ಈ ಮೂಲಕ ಪಹಲ್ಗಾಮ್‌ನಲ್ಲಿ ಮೃತಪಟ್ಟ ಜನರ ಆತ್ಮಕ್ಕೆ ಶಾಂತಿ ಸಿಕ್ಕಿದೆ ಈ ದಾಳಿ ಒಂದು ಎಚ್ಚರಿಕೆ ಅಷ್ಟೇ ಇನ್ನಾದ್ರೂ ಪಾಕಿಸ್ತಾನ ಬದಲಾಗಲಿ ಭಾರತದ ಎದುರು ಪಾಕಿಸ್ತಾನ ಶರಣಾಗಲಿ ಎಂದು ಸುರೇಶ್ ಒತ್ತಾಯಿಸಿದರು.

# ಕೆ.ಹೆಚ್. ಸಿಂಚನಗೆ ಚಿನ್ನದ ಪದಕ




ಹಾಸನ: ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ಮೇ 5 ರಿಂದ 12ರ ವರೆಗೆ ಹಮ್ಮಿಕೊಂಡಿರುವ ಏಷ್ಯನ್ ಪವರ್ ಲಿಫ್ಟಿಂಗ್ ಸಬ್ ಜೂನಿಯರ್ ಚಾಂಪಿಯನ್ ಶಿಪ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದ್ದ ಜಿಲ್ಲೆಯ ಕೆ.ಹೆಚ್. ಸಿಂಚನ ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ.

ಜಿಲ್ಲಾ ಪವರ್ ಲಿಫ್ಟಿಂಗ್ ಕಾರ್ಯದರ್ಶಿ ಹನುಮಂತೇಗೌಡ ಅವರ ಪುತ್ರಿ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

# ಹರಿಹಳ್ಳಿ ಕೆಂಚಾಂಬಿಕೆ ದೇವಿ ಜಾತ್ರೆ ಆರಂಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಸುತ್ತಲಿನ 48 ಹಳ್ಳಿಗಳಿಗೆ ಸೇರಿದ ಕೆಂಚಾಂಬ ದೇವಿ ವರ್ಷದ ದೊಡ್ಡ ಜಾತ್ರೆ ಅತ್ಯಂತ ವೈಭವ, ಭಯ, ಭಕ್ತಿಯಿಂದ ಮೇ 4ರಿಂದ 12ರ ವರೆಗೆ ಹರಿಹಳ್ಳಿ ಗ್ರಾಮದಲ್ಲಿರುವ ಕೆಂಚಾಂಬಿಕೆ ದೇವಸ್ಥಾನದಲ್ಲಿ ಆರಂಭವಾಗಿದೆ.

ಜಾತ್ರೆ ಪ್ರಾರಂಭವಾಗುವ ಒಂದು ವಾರ ಮೊದಲು 48 ಹಳ್ಳಿಗಳಲ್ಲೂ ಸುಗ್ಗಿ ಸಾರು ಹಾಕಲಾಗುತ್ತದೆ. ಸಾರು ಹಾಕಿದ ನಂತರ 48 ಹಳ್ಳಿಗಳ ವ್ಯಾಪ್ತಿಯಲ್ಲಿ ಹಸಿ ಕೊನೆ ಕಡಿಯುವಂತಿಲ್ಲ, ಮುರಿಯುವಂತಿಲ್ಲ. ಒಗ್ಗರಣೆ ಹಾಕುವಂತಿಲ್ಲ. ರೊಟ್ಟಿ ಮಾಡುವುದು, ಮಾಂಸಾಹಾರ ಮಾಡುವುದು ನಿಷೇಧ. ಸಾರು ಹಾಕುವ ಸಂದರ್ಭದಲ್ಲಿ ಗ್ರಾಮದ ಮಹಿಳೆಯರು ಹೊರ ಊರಿನಲ್ಲಿದ್ದಾಗ ಆಕಸ್ಮಿಕವಾಗಿ ಋತುಚಕ್ರಕ್ಕೊಳಗಾದರೆ ಊರಿನೊಳಗೆ ಪ್ರವೇಶಿಸುವಂತಿಲ್ಲ. ಸೂತಕಕ್ಕೆ ಸಿಕ್ಕಿದವರು ಹೊರ ಊರಿಗೆ ತೆರಳುತ್ತಾರೆ. ಈ ಕಟ್ಟುಪಾಡು ಇಂದಿಗೂ ನಡೆದು ಬರುತ್ತಿದೆ. ದೇವಿಗೆ ಪ್ರಾಣಿ ಬಲಿ ಇಲ್ಲ. ಕೆಂಪು ಅನ್ನದ ಬಲಿ ಅರ್ಪಿಸಲಾಗುತ್ತದೆ.

ಶನಿವಾರ ರಾತ್ರಿ ಹರಿಹಳ್ಳಿ ಗ್ರಾಮದ ಮೂಲ ದೇವಸ್ಥಾನದಲ್ಲಿ ಸಪ್ತಮಾತೃಕೆಯರ ಮುಖವಾಡವನ್ನಿಟ್ಟು, ರಾತ್ರಿ 10 ಗಂಟೆಯವರೆಗೆ ಅಲಂಕಾರ ಮಾಡಿ ಸುಗ್ಗಿ ನಡೆಯುತ್ತದೆ. ಮೇ 11 ರಂದು ದೊಡ್ಡ ಜಾತ್ರೆ ನಡೆಯುತ್ತದೆ. ಅಂದು ಪ್ರತಿಯೊಬ್ಬರೂ ದೇವಿ ಪಾದ ಮುಟ್ಟಿ ನಮಸ್ಕರಿಸಲು ಅವಕಾಶ ನೀಡಲಾಗುತ್ತದೆ.

ಐತಿಹಾಸಿಕ ಹಿನ್ನೆಲೆ: ಹಾಸನಾಂಬ ದೇವಿ ಸೇರಿ ಒಟ್ಟು ಏಳು ಜನ ಸಹೋದರಿಯರು. ಹಿರಿಯವರಾದ ಕೆಂಚಾಂಬ (ಬ್ರಾಹ್ಮೀದೇವಿ) ಹರಿಹಳ್ಳಿಯಲ್ಲಿ ನೆಲೆಸಿದ್ದಾರೆ. ಎರಡನೇ ಮಹೇಶ್ವರಿ ದೇವಿ, ಮೂರನೇ ಕೋಮಾರಿ ದೇವಿ, ನಾಲ್ಕನೇ ವಾರಾಹಿ ದೇವಿ ಎಂಬುವವರು ಹಾಸನಾಂಬ ದೇವಾಲಯದಲ್ಲಿ ತ್ರಿಮೂರ್ತಿಗಳಾಗಿ ನೆಲೆಸಿದ್ದಾರೆ. ಐದನೇ ವೈಷ್ಣವಿ ದೇವಿ, ಆರನೇ ಇಂದ್ರಾಣಿ ದೇವಿ ಮತ್ತು ಏಳನೇ ಚಾಮುಂಡಿ ದೇವಿಯರು ದೇವಿಗೆರೆ ಕೊಳದಲ್ಲಿ ನೆಲೆಸಿದ್ದಾರೆ. ಆದ್ದರಿಂದ ಹಾಸನಾಂಬ ದೇವಾಲಯ, ಕೆಂಚಾಂಬ ದೇವಾಲಯ ಮತ್ತು ದೇವಿಗೆರೆಗೆ ಪೂರಕ ಸಂಬಂಧವಿದೆ.

ಮಹಿಷಾಸುರನೆಂಬ ರಾಕ್ಷಸನನ್ನು ಚಾಮುಂಡೇಶ್ವರಿ ಸಂಹರಿಸಿದ ನಂತರ, ಅವನ ಮಂತ್ರಿಯಾಗಿದ್ದ ರಕ್ತಬೀಜಾಸುರ ಎಂಬ ರಾಕ್ಷಸ ದೇವಿಯಿಂದ ತಪ್ಪಿಸಿಕೊಂಡು ಈ ಭಾಗಕ್ಕೆ ಬರುತ್ತಾನೆ. ಅವನ ಉಪಟಳ ದಿನೇ ದಿನೇ ತೀಕ್ಷ್ಣವಾಗಿ, ಇಲ್ಲಿಯ ಪ್ರಾಣಿ, ಪಶು, ಪಕ್ಷಿಗಳಾದಿಯಾಗಿ ಮಾನವರಿಗೂ ಬದುಕುವುದೇ ಕಷ್ಟವೆಂಬ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಈ ಸಂದರ್ಭದಲ್ಲಿ ಮಾನವರ ಮೊರೆಗೆ ಓಗೊಟ್ಟು ರಕ್ತಬೀಜಾಸುರನ ಸಂಹಾರಕ್ಕೆಂದು ಹರಿಹಳ್ಳಿಯಲ್ಲಿ ಆದಿಶಕ್ತಿ ಅವತರಿಸುತ್ತಾಳೆ.

ಕೆಂಚಾಂಬಿಕಾ ದೇವಿಯು ಸರಸ್ವತಿ, ಪಾರ್ವತಿ ಹಾಗೂ ಲಕ್ಷ್ಮಿಯರ ಸಂಪೂರ್ಣ ಶಕ್ತಿ ಪಡೆದು ಇಲ್ಲಿಗೆ ಬಂದು, ರಾಕ್ಷಸರೊಡನೆ ಯುದ್ಧ ಮಾಡಿ ಅನೇಕರನ್ನು ಸಂಹಾರ ಮಾಡುತ್ತಾಳೆ. ಆದರೆ ರಕ್ತ ಬೀಜಾಸುರನನ್ನು ಕೊಲ್ಲುವುದು ಸುಲಭದ ಮಾತಾಗಿರುವುದಿಲ್ಲ. ಈತ ಬ್ರಹ್ಮನಿಂದ ವರ ಪಡೆದವನಾಗಿರುತ್ತಾನೆ. ಇವನ ಒಂದು ಹನಿ ರಕ್ತ ನೆಲಕ್ಕೆ ಬಿದ್ದರೆ ಅವನಷ್ಟೆ ಶಕ್ತಿಯುಳ್ಳ ಸಹಸ್ರ ರಾಕ್ಷಸರು ಹುಟ್ಟುತ್ತಿದ್ದರು. ಹೀಗಾಗಿ ಆದಿಶಕ್ತಿ ಕೆಂಚಾಂಬಿಕೆಯು ಈತನನ್ನು ಉಪಾಯದಿಂದ ಸಂಹರಿಸುವ ಸಂಕಲ್ಪ ಮಾಡಿ, ತನ್ನ ನಾಲಿಗೆಯನ್ನು ನೆಲದ ಮೇಲೆ ಹಾಸಿ ಅದರ ಮೇಲೆ ರಾಕ್ಷಸ ಬರುವಂತೆ ಮಾಡಿ ಕೊಂದಳು. ಹೀಗೆ ರಕ್ತ ಬೀಜಾಸುರನ ಸಂಹಾರ ಮಾಡಿದ ಸ್ಥಳದಲ್ಲೇ ಕೆಂಚಾಂಬಿಕೆ ನೆಲೆಸಿದ್ದಾಳೆ ಎಂದು ಇತಿಹಾಸ ಹೇಳುತ್ತದೆ. ಈ ಕತೆಗೆ ಪೂರಕವಾಗಿ ಇಲ್ಲಿನ ಮಣ್ಣು ಕೆಂಪಾಗಿದೆ ಎಂದು ಪ್ರಧಾನ ಅರ್ಚಕ ರಾಮಸ್ವಾಮಿ ಹೇಳುತ್ತಾರೆ.

# ಒಂದು ತಿಂಗಳಲ್ಲಿ ರಸ್ತೆ ಕೆಲಸ ಮುಗಿಸಬೇಕು: ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಆಲೂರು: ಪಟ್ಟಣದ ಮುಖ್ಯ ರಸ್ತೆ ಡಾಂಬರೀಕರಣ ಕಾಮಗಾರಿ ಲೋಪ ದೋಷವಿಲ್ಲದೆ ನಿಗದಿತ ಗಡುವಿನೊಳಗೆ ಮುಗಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ಸೂಚಿಸಿದರು.

ಪಟ್ಟಣದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ ಮರು ಡಾಂಬರಿಕರಣ ಕಾಮಗಾರಿ ಪರಿಶೀಲಿಸಿದ ಅವರು ಲೋಕೋಪಯೋಗಿ ಇಲಾಖೆ ಎಇಇ ಮುರುಗೇಶ್ ಹಾಗು ಗುತ್ತಿಗೆದಾರ ಮಹೇಶ್ ಅವರಿಗೆ ಸೂಚಿಸಿದರು.

ಗುಣಮಟ್ಟದ ಕಾಮಗಾರಿ ಮಾಡದ ಹಿನ್ನೆಲೆಯಲ್ಲಿ ಕೇವಲ ಎರಡೇ ವರ್ಷಕ್ಕೆ ರಸ್ತೆ ಹಾಳಾಗಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಅಂದಾಜು ಪಟ್ಟಿಯಲ್ಲಿರುವಂತೆ ಗುಣಮಟ್ಟದ ಕಾಮಗಾರಿ ನಿರ್ವಹಿಸಬೇಕು. ಕಳಪೆ ಕಾಮಗಾರಿ ಕಂಡುಬಂದಲ್ಲಿ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು. ಸಾರ್ವಜನಿಕರಿಗೆ ತೊಂದರೆ ಆಗದಂತೆ ತಿಂಗಳೊಳಗೆ ಕಾಮಗಾರಿ ಮುಗಿಸಿ ವಾಹನ ಓಡಾಟಕ್ಕೆ ಅವಕಾಶ ಮಾಡಿಕೊಡಬೇಕು ಎಂದು ನಿರ್ದೇಶನ ನೀಡಿದರು.

ಸ್ಥಳೀಯರು ಮಾತನಾಡಿ, ಕಾಮಗಾರಿ ನಡೆಯುತ್ತಿರುವ ಕೆಲವೆಡೆ ಚರಂಡಿ ಮುಚ್ಚಿ ಹೋಗಿವೆ. ಚರಂಡಿಗಳಲ್ಲಿ ಕಸ ಕಡ್ಡಿ ತೆರವುಗೊಳಿಸದಿದ್ದರೆ ಕಾಮಗಾರಿ ನಿಷ್ಪ್ರಯೋಜಕವಾಗುತ್ತದೆ ಎಂದರು. ಆಗ ಸ್ಥಳಕ್ಕೆ ಪಟ್ಟಣ ಪಂಚಾಯಿತಿ ಮುಖ್ಯಧಿಕಾರಿ ಅವರನ್ನು ಕರೆಸಿದ ಶಾಸಕರು, ಮುಚ್ಚಿರುವ ಚರಂಡಿ ಸಮಸ್ಯೆ ಬಗೆಹರಿಸಬೇಕು. ಮಳೆ ನೀರು ಮುಂದಕ್ಕೆ ಹರಿಯದೆ ರಸ್ತೆಯಲ್ಲಿ ನಿಂತು ಅಲ್ಲಲ್ಲಿ ಹಾಳಾಗಿ ಹೋಗುತ್ತಿದೆ. ಆದ್ದರಿಂದ ಚರಂಡಿಯಲ್ಲಿರುವ ಕಸಕಡ್ಡಿ ತೆರವುಗೊಳಿಸಿ ಗುಣಮಟ್ಟದ ರಸ್ತೆ ಕಾಮಗಾರಿಗೆ ಸಹಕಾರ ನೀಡಬೇಕು ಎಂದರು.

ಕಾಮಗಾರಿ ವಿಷಯದಲ್ಲಿ ರಾಜಿ ಮಾಡಿಕೊಳ್ಳುವುದಿಲ್ಲ. ರಾಜ್ಯ ಸರ್ಕಾರ ಅಭಿವೃದ್ಧಿಗೆ ಅನುದಾನ ನೀಡುತ್ತಿಲ್ಲ. ಆದರೂ ಇರುವ ಅಲ್ಪ ಅನುದಾನದಲ್ಲಿ ಗ್ರಾಮೀಣ ಭಾಗದ ಅಭಿವೃದ್ಧಿಗೆ ಶಕ್ತಿಮೀರಿ ಶ್ರಮಿಸಲಾಗುತ್ತಿದೆ ಎಂದು ಹೇಳಿದರು.

ಇಂಜಿನಿಯರ್ ಮಧು, ಹಂಚೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಷಣ್ಮುಖಪ್ಪ, ಹುಣಸವಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಮೋಹನ್ ಮಾವನೂರು, ನವೀನ್ ದಡದಹಳ್ಳಿ ಹಾಗೂ ಇತರರಿದ್ದರು.

# ಫಲಿತಾಂಶದಲ್ಲಿ ದಾಖಲೆ ಬರೆದ ಅಟ್ಟಾವರ ಶಾಲೆ

## 8 ವರ್ಷಗಳಿಂದ ಸತತ ಶೇ. 100 ಫಲಿತಾಂಶ | ಶಿಕ್ಷಕರ ಸಂಘಟಿತ ಪ್ರಯತ್ನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತಾಲ್ಲೂಕಿನ ಅಟ್ಟಾವರ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಎಸ್ಎಸ್ಎಲ್ಸಿ ಪರೀಕ್ಷಾ ಫಲಿತಾಂಶದಲ್ಲಿ ಶೇ. 100 ರಷ್ಟು ಫಲಿತಾಂಶ ಸಾಧಿಸಿ ಕಳೆದ ಎಂಟು ವರ್ಷಗಳಿಂದ ನಾಗಾಲೋಟ ಮುಂದುವರೆಸಿದೆ.

ಸರ್ಕಾರಿ ಶಾಲೆಗಳಲ್ಲಿ ಫಲಿತಾಂಶ ಸುಧಾರಣೆ ತೀರಾ ಕಷ್ಟದ ಕೆಲಸ. ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರ ಆರಂಭದ ಉತ್ಸಾಹ ನಂತರದ ದಿನಗಳಲ್ಲಿ ಕಡಿಮೆಯಾಗಿ ಫಲಿತಾಂಶ ಕುಸಿಯುವುದು ಸಾಮಾನ್ಯ. ಆದರೆ ಅಟ್ಟಾವರ ಶಾಲೆ ಸತತ ಎಂಟು ವರ್ಷಗಳಿಂದ ಪರೀಕ್ಷೆಯಲ್ಲಿ ಒಬ್ಬ ವಿದ್ಯಾರ್ಥಿಯೂ ಅನುತ್ತೀರ್ಣರಾಗದಂತೆ ಪಠ್ಯ ಬೋಧನೆ ಮಾಡಿರುವುದಲ್ಲದೆ ಪರೀಕ್ಷೆಗೆ ತಯಾರು ಮಾಡಿರುವುದು ಶ್ಲಾಘನೀಯ.

ಈ ವರ್ಷ ಪರೀಕ್ಷೆ ಬರೆದ 25 ವಿದ್ಯಾರ್ಥಿಗಳಲ್ಲಿ 7 ವಿದ್ಯಾರ್ಥಿಗಳು




ಡಿಸ್ಟಿಂಕ್ಷನ್, 14 ಮಕ್ಕಳು ಪ್ರಥಮ ಶ್ರೇಣಿಯಲ್ಲಿ ಪಾಸಾಗಿದ್ದಾರೆ. ನಾಲ್ವರು ದ್ವಿತೀಯ ಶ್ರೇಣಿ ಪಡೆದಿದ್ದಾರೆ. 625ಕ್ಕೆ 599 ಅಂಕ ಪಡೆದ ಲಕ್ಷ್ಮೀ ಈ ವರ್ಷದ ಶಾಲಾ ಟಾಪರ್ ಆಗಿದ್ದಾರೆ. 2017-18 ರಿಂದ ಇಲ್ಲಿವರೆಗೆ 210 ವಿದ್ಯಾರ್ಥಿಗಳು ಶಾಲೆಯಲ್ಲಿ ಎಸ್ಎಸ್ಎಲ್ಸಿ ಮುಗಿಸಿದ್ದಾರೆ.

ಅಟ್ಟಾವರ ಸರ್ಕಾರಿ ಪ್ರೌಢ ಶಾಲೆಯ ಫಲಿತಾಂಶ ಸುಧಾರಣೆಗೆ ಈ ಹಿಂದೆ ಮುಖ್ಯ ಶಿಕ್ಷಕರಾಗಿದ್ದ ಕೆ.ಪಿ. ನಾರಾಯಣ್ ಅವರೇ ಭದ್ರ ಬುನಾದಿ ಹಾಕಿದ್ದಾರೆ ಎಂದು ಶಿಕ್ಷಕರು ಹಾಗೂ ಗ್ರಾಮಸ್ಥರು ಹೆಮ್ಮೆಯಿಂದ ಹೇಳುತ್ತಾರೆ. ಪ್ರಸ್ತುತ ಅರಕಲಗೂಡು ಕ್ಷೇತ್ರ ಶಿಕ್ಷಣಾಧಿಕಾರಿಯಾಗಿರುವ ನಾರಾಯಣ್ ಅವರು 2016 ರಿಂದ ಶಾಲಾ ಮುಖ್ಯ ಶಿಕ್ಷಕರಾಗಿ 4 ವರ್ಷ

> ಸರ್ಕಾರಿ ಶಾಲೆ ಫಲಿತಾಂಶದಲ್ಲಿ ಸ್ಥಿರತೆ ಕಾಪಾಡಿಕೊಳ್ಳುವುದು ಸುಲಭದ ಕೆಲಸವಲ್ಲ. ನಾನು ಅಲ್ಲಿಂದ ವರ್ಗವಾದ ನಂತರವೂ ಅದೇ ಸಾಧನೆ ಮುಂದುವರೆದಿರುವುದು ಹೆಮ್ಮೆ ತರಿಸಿದೆ. ಜೂನ್ ತಿಂಗಳಲ್ಲಿ ಎಲ್ಲಾ ವಿದ್ಯಾರ್ಥಿ ಹಾಗು ಶಿಕ್ಷಕರಿಗೆ ಅಭಿನಂದನೆ ಸಮಾರಂಭ ಹಮ್ಮಿಕೊಳ್ಳಲಾಗುವುದು.
>
> -ಕೆ.ಪಿ. ನಾರಾಯಣ್, ಅರಕಲಗೂಡು ಬಿಇಒ

ಕಾರ್ಯನಿರ್ವಹಿಸಿದ್ದಾರೆ. ಫಲಿತಾಂಶದಲ್ಲಿ ಹಿಂದುಳಿದಿದ್ದ ಶಾಲೆಗೆ ಹೊಸ ಶಕೆ ಆರಂಭಿಸಬೇಕೆಂದು ನಿರ್ಧರಿಸಿದ್ದ ಅವರು ಶಾಲೆಗೆ ಬೇಕಿದ್ದ ಮೂಲಸೌಕರ್ಯಗಳ ಕಲ್ಪಿಸಲು ಪಣ ತೊಟ್ಟು ಕೆಲಸ ಮಾಡಿದರು. ಅದಕ್ಕೆ ಗ್ರಾಮಸ್ಥರು ಸಹ ಬೆನ್ನೆಲುಬಾಗಿ ನಿಂತಿದ್ದರು. ಸಿಎಸ್ಆರ್ ಹಾಗೂ ವಿವಿಧ ಸೇವಾ ಸಂಸ್ಥೆಗಳನ್ನು ಸಂಪರ್ಕಿಸಿ ಶಾಲೆಗೆ ಬೇಕಿದ್ದ ಸವಲತ್ತುಗಳನ್ನು ಪಡೆದರು. ಅಂದಿನ ಉಪವಿಭಾಗಾಧಿಕಾರಿಯಾಗಿದ್ದ ಡಾ. ಹೆಚ್.ಎಲ್. ನಾಗರಾಜ್ ಅವರು ಸರ್ಕಾರಿ ಶಾಲೆ ಅಭಿವೃದ್ಧಿಗೆ ನೆರವು ನೀಡಿದ್ದಾರೆ.

ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಬೇಕೆಂದು ಹಠಕ್ಕೆ ಬಿದ್ದ ನಾರಾಯಣ್ ಅವರು ಎಲ್ಲಾ ಶಿಕ್ಷಕರೊಟ್ಟಿಗೆ ಸಮನ್ವಯ ಸಾಧಿಸಿ ಪರಿಹಾರ ಬೋಧನೆ, ಗುಂಪು ಕಲಿಕೆ, ವಿದ್ಯಾಭ್ಯಾಸದಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ತರಗತಿ ಆಯೋಜಿಸಿದರು. ಅಟ್ಟಾವರ ಮಾತ್ರವಲ್ಲದೆ ಸುತ್ತಲಿನ ಗ್ರಾಮಗಳ ಮಕ್ಕಳು ಶಾಲೆಗೆ ಬರುತ್ತಿದ್ದರಿಂದ ರಾತ್ರಿ 9 ಗಂಟೆ ವರೆಗೆ ಪಾಠ ಬೋಧನೆ ಮಾಡುತ್ತಿದ್ದರು. ವಿದ್ಯಾರ್ಥಿನಿಯರನ್ನು ಮನೆಗೆ ಕರೆದುಕೊಂಡು ಹೋಗಲು ಪೋಷಕರಿಗೆ ತಿಳಿಸಿದರೆ ಪರೀಕ್ಷಾ ಅವಧಿಯಲ್ಲಿ ಬಾಲಕರಿಗೆ ಶಾಲೆಯಲ್ಲೇ ಉಳಿಯುವ ವ್ಯವಸ್ಥೆ ಮಾಡಿಕೊಟ್ಟಿದ್ದರು. ಹೀಗಾಗಿ ಫಲಿತಾಂಶದಲ್ಲಿ ಸುಧಾರಣೆ ಸಾಧಿಸಿದ್ದು ಮಾತ್ರವಲ್ಲದೆ ರಾಜ್ಯ ಮಟ್ಟದಲ್ಲಿ ಅಟ್ಟಾವರ ಶಾಲೆಗೆ ಕೀರ್ತಿ ಬಂದಿತು. ಶಾಲೆಯಿಂದ ವರ್ಗವಾದರೂ ಅಲ್ಲಿನ ಶಿಕ್ಷಕರೊಂದಿಗೆ ನಿಟಕ ಸಂಪರ್ಕ ಹೊಂದಿದ್ದ ಅವರು ಫಲಿತಾಂಶ ಸುಧಾರಣೆಗೆ ತಮ್ಮದೇಯಾದ ಸಲಹೆ ಸೂಚನೆ ನೀಡುತ್ತಾ ಬಂದಿದ್ದಾರೆ.

ಪ್ರಸ್ತುತ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಹೆಚ್.ಪಿ. ರಾಜಶೇಖರ್ ಸಹ ಅದೇ ಪರಿಶ್ರಮದಿಂದ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಕೆಲಸ ಮಾಡುತ್ತಿದ್ದಾರೆ. ಸರ್ಕಾರಿ ಶಾಲೆಗಳಿಗೆ ಪೋಷಕರು ಧೈರ್ಯವಾಗಿ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಬಹುದು ಎಂದು ಅವರು ಹೇಳುತ್ತಾರೆ.

# ಪಾಕಿಸ್ತಾನಿ ಪ್ರಜೆಗಳ ಗಡಿಪಾರಿಗೆ ಬಿಜೆಪಿ ಆಗ್ರಹ




ಹಾಸನ: ಉಗ್ರ ಕೃತ್ಯಗಳಿಗೆ ಸಂಪೂರ್ಣ ಕಡಿವಾಣ ಹಾಕಬೇಕೆಂದರೆ ದೇಶದಲ್ಲಿರುವ ಪಾಕಿಸ್ತಾನಿ ಪ್ರಜೆಗಳನ್ನು ಗಡಿಪಾರು ಮಾಡಬೇಕಿದ್ದು ಆ ನಿಟ್ಟಿನಲ್ಲಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಜಿಲ್ಲಾ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾಧಿಕಾರಿ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು ಪಾಕಿಸ್ತಾನ ವಿರುದ್ಧ ಧಿಕ್ಕಾರ ಕೂಗಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಮಾತನಾಡಿ, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಏ. 22 ರಂದು ನಡೆದ 26 ಪ್ರವಾಸಿಗರನ್ನು ಉಗ್ರರು ಗುಂಡಿಕ್ಕಿ ಕೊಲೆಗೈದಿದ್ದಾರೆ. ಹಿಂದುಗಳನ್ನು ಗುರಿಯಾಗಿಸಿ ನಡೆದ ದಾಳಿಯನ್ನು ಯಾವ ಕಾರಣಕ್ಕೂ ಕ್ಷಮಿಸುವುದಿಲ್ಲ. ಪಾಕಿಸ್ತಾನ ಉಗ್ರರಿಗೆ ರಕ್ಷಣೆ ನೀಡುತ್ತಿದೆ ಎಂಬುದು ಈ ಘಟನೆಯಿಂದ ಸಾಬೀತಾಗಿದೆ. ಆದ್ದರಿಂದ ಕೇಂದ್ರ ಸರ್ಕಾರ ಕೈಗೊಳ್ಳುವ ಎಲ್ಲಾ ನಿರ್ಧಾರಗಳಿಗೆ ಪ್ರತಿಯೊಬ್ಬರು ಬೆಂಬಲಿಸಬೇಕು ಎಂದರು.

ಪಾಕಿಸ್ತಾನದ ಬೇಹುಗಾರಿಕಾ ಸಂಸ್ಥೆ ಐಎಸ್ಐ ನೆರವಿನಿಂದ ಪಾಕಿಸ್ತಾನ ಸೇನೆ ದಾಳಿಯ ಯೋಜನೆ ರೂಪಿಸಿ ಬರ್ಬರ ಹತ್ಯಾಕಾಂಡ ನಡೆಸಿದೆ. ಜಗತ್ತಿನ ಶಕ್ತಿಶಾಲಿ ರಾಷ್ಟ್ರಗಳು ಭಾರತಕ್ಕೆ ಬೆಂಬಲ ಸೂಚಿಸಿವೆ. ಕೇಂದ್ರ ಸರ್ಕಾರ ತಡಮಾಡದೆ ಉಗ್ರರನ್ನು ಮಟ್ಟ ಹಾಕಬೇಕು ಎಂದು ಒತ್ತಾಯಿಸಿದರು.

# ರೈಲ್ವೆ ಜಾಗದಲ್ಲಿ ಅಂಗಡಿ ಮುಂಗಟ್ಟು: ತೆರವಿಗೆ ಮನವಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಟ್ಟಣದ ಆಚಂಗಿ ರೈಲ್ವೆ ಸೇತುವೆ ಸಮೀಪ ಕೆಲವರು ತಿರುಗಾಡುವ ರಸ್ತೆಯನ್ನು ಅಕ್ರಮಿಸಿ ಅಂಗಡಿ ಮುಂಗಟ್ಟು, ಮನೆಗಳನ್ನು ನಿರ್ಮಿಸಿದ್ದು ತೆರವುಗೊಳಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ ಹಾಗೂ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸರ್ಕಾರಿ ಹಾಗೂ ರೈಲ್ವೆ ಇಲಾಖೆಗೆ ಸೇರಿದ ಕೋಟ್ಯಂತರ ರೂಪಾಯಿ ಬೆಲೆಬಾಳುವ ಜಾಗದಲ್ಲಿ ಸುಮಾರು 4-5 ಅಂಗಡಿ ಮತ್ತು ವಾಸದ ಮನೆಗಳನ್ನು ನಿರ್ಮಿಸಲಾಗಿದೆ. ಅದರಿಂದ ವಾಹನ ಸವಾರರು ಹಾಗೂ ಗ್ರಾಮಸ್ಥರಿಗೆ ಸಂಚಾರಕ್ಕೆ ದಾರಿಯೇ ಇಲ್ಲದಂತಾಗಿದೆ. ರಾತ್ರಿ ವೇಳೆ ಈ ಸ್ಥಳದಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿರುವ ಬಗ್ಗೆಯೂ ದೂರುಗಳು ಕೇಳಿಬಂದಿವೆ.

ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಆಚಂಗಿ ಘಟಕದ ಅಧ್ಯಕ್ಷ ವಜೀರ್ ನೇತೃತ್ವದಲ್ಲಿ ಗ್ರಾಮಸ್ಥರು, ನೈಋತ್ಯ ರೈಲ್ವೆ ಹುಬ್ಬಳ್ಳಿ ಪ್ರಧಾನ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದ್ದಾರೆ. ಹಲವು ಬಾರಿ ತಾಲ್ಲೂಕು ರೈಲ್ವೆ ಅಧಿಕಾರಿಗಳಿಗೆ ದೂರು ನೀಡಿದರೂ ಕ್ರಮ ಕೈಗೊಂಡಿಲ್ಲ ಎಂದು ವಜೀರ್ ಆರೋಪಿಸಿದ್ದಾರೆ. ಕರವೇ ಸಂಘಟನೆಯಿಂದ ರೈಲ್ವೆ ಮೇಲಧಿಕಾರಿಗಳ ಗಮನಕ್ಕೆ ಈ ವಿಷಯವನ್ನು ಮತ್ತೆ ತಂದಿದ್ದು, ಅಕ್ರಮ ಅಂಗಡಿಗಳನ್ನು ತೆರವುಗೊಳಿಸಿ, ಜಾಗವನ್ನು ರೈಲ್ವೆ ಇಲಾಖೆಯ ವಶಕ್ಕೆ ಒಪ್ಪಿಸುವಂತೆ ಕೋರಲಾಗಿದೆ. ಮುಂದೆ ಯಾವುದೇ ಅಂಗಡಿಗಳ ನಿರ್ಮಾಣಕ್ಕೆ ಅವಕಾಶ ನೀಡಬಾರದು ಎಂದೂ ಮನವಿ ಮಾಡಲಾಗಿದೆ. ಕರವೇ ತಾಲ್ಲೂಕು ಅಧ್ಯಕ್ಷ ರಮೇಶ್ ಪೂಜಾರಿ, ನಿಶ್ಚಯ್, ರವಿ, ಇಬ್ರಾಹಿಂ, ವಿಶ್ವ, ಇಕ್ಬಾಲ್ ಇತರರಿದ್ದರು.

# ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗೆ ವೇಗ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಷ್ಟ್ರೀಯ ಹೆದ್ದಾರಿ 75ರ ಕಾಮಗಾರಿ ವೇಗಗತಿಯಲ್ಲಿ ನಡೆಯುತ್ತಿದ್ದು, ಜೂನ್ ಅಂತ್ಯದೊಳಗೆ ಕೆಲಸ ಪೂರ್ಣಗೊಳಿಸಲಾಗುವುದು ಎಂದು ಸಂಸದ ಶ್ರೇಯಸ್ ಪಟೇಲ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಹೆದ್ದಾರಿ-75 ಸಕಲೇಶಪುರ ತಾಲ್ಲೂಕು ಮಾರ್ಗದಲ್ಲಿ ಮಳೆಗಾಲದಲ್ಲಿ ಉಂಟಾಗುವ ಭೂಕುಸಿತ ತಡೆಯಲು ತಡೆಗೋಡೆ ನಿರ್ಮಾಣ ಕಾರ್ಯ ನಡೆಯುತ್ತಿದೆ. ಈ ಬಗ್ಗೆ ಮುಂದಿನ ವಾರ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪ್ರಗತಿ ಪರಿಶೀಲಿಸಲಾಗುವುದು. ಈ ಹಿಂದೆ ಸ್ಥಳ ಪರಿಶೀಲನೆ ನಡೆಸಿ ಜೂನ್ ಅಂತ್ಯಕ್ಕೆ ಕಾಮಗಾರಿ ಪೂರ್ಣಗೊಳಿಸುತ್ತೇವೆಂದು ನೀಡಿದ ಮಾತಿನಂತೆ ಕೆಲಸ



ಮುಗಿಸಲಾಗುವುದು. ಆದರೆ, ಸಣ್ಣಪುಟ್ಟ ಕೆಲಸಗಳು ಇದ್ದೇ ಇರುತ್ತವೆ. ಆದಷ್ಟು ಶೀಘ್ರವಾಗಿ ಮುಗಿಸಲು ಸಂಬಂಧಪಟ್ಟ ಅಧಿಕಾರಿಗಳಿ ಸೂಚನೆ ನೀಡಲಾಗುವುದು ಎಂದು ಹೇಳಿದರು.

ಸಕಲೇಶಪುರ ತಾಲ್ಲೂಕಿನ ದೊಡ್ಡತಪ್ಲೆ ಬಳಿ ಭೂಸ್ವಾಧೀನ ಪ್ರಕ್ರಿಯೆ ನಡೆಯಬೇಕಿದೆ. ಭೂಮಿ ಕಳೆದುಕೊಂಡ ರೈತರಿಗೆ ರಾಜ್ಯ ಅಥವಾ ಕೇಂದ್ರ ಸರ್ಕಾರ ಯಾರು ಪರಿಹಾರ ನೀಡಬೇಕಾಗುತ್ತದೆ ಎಂಬುದರ ಬಗ್ಗೆ ತಿಳಿದು ಪರಿಹಾರ ಕೊಡಿಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ.

ಈ ಬಗ್ಗೆ ಸಂಬಂಧಪಟ್ಟ ಸಚಿವರನ್ನು ಭೇಟಿ ಮಾಡಿ ಮನವಿ ಮಾಡುತ್ತೇನೆಂದು ತಿಳಿಸಿದರು.

ನಗರದ ರಾಜೀವ್ ಕಾಲೇಜು ಬಳಿ ರೈಲ್ವೆ ಮೇಲ್ಸೇತುವೆ ಬೀಮ್ ಗಳಲ್ಲಿ ಬಿರುಕು ಕಾಣಿಸಕೊಂಡ ಹಿನ್ನೆಲೆ ದುರಸ್ತಿ ಕಾರ್ಯ ನಡೆಸುವ ಸಲುವಾಗಿ ಜಿಲ್ಲಾಧಿಕಾರಿ ಆ ಮಾರ್ಗದಲ್ಲಿ ವಾಹನಗಳ ಸಂಚಾರ ನಿಷೇಧಿಸಿ, ಪರ್ಯಾಯ ಮಾರ್ಗ ಕಲ್ಪಿಸಿದ್ದಾರೆ. ಕೆಲಸ ಆರಂಭವಾಗಿದ್ದು, ಈಗ ಇರುವ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸುವ ಕೆಲಸ ಮಾಡಲಾಗುವುದು.

15 ದಿನಗಳಲ್ಲಿ ದುರಸ್ತಿ ಕಾರ್ಯ ಮುಗಿಸಿ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗುವುದು ತಿಳಿಸಿದರು. ಪಹಲ್ಗಾಮ್ ಘಟನೆಯ ವಿಚಾರದಲ್ಲಿ ಪಕ್ಷ, ಸರ್ಕಾರದ ಬಗ್ಗೆ ನೋಡಬಾರದು. ಭಯೋತ್ಪಾದನೆ ವಿರುದ್ಧ ದೇಶದ ಪ್ರತಿಯೊಬ್ಬರು ಹೋರಾಟ ನಡೆಸಬೇಕಿದೆ. ಕೇಂದ್ರ ಸರ್ಕಾರ, ಗೃಹ ಸಚಿವಾಲಯ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾವೆಲ್ಲ ಬದ್ಧ ಎಂದು ಈಗಾಗಲೇ ಕಾಂಗ್ರೆಸ್ ಪಕ್ಷದ ವರಿಷ್ಠರು ತಿಳಿಸಿದ್ದಾರೆ. ಅದರಂತೆ ನಾವು ನಡೆದುಕೊಳ್ಳುತ್ತೇವೆ. ಲೋಕಸಭೆ ವಿಪಕ್ಷ ನಾಯಕರಾಗಿರುವ ರಾಹುಲ್ ಗಾಂಧಿ ಅವರು ತೆಗೆದುಕೊಳ್ಳುವ ತೀರ್ಮಾನಕ್ಕೆ ಕಾಂಗ್ರೆಸ್‌ನ ಎಲ್ಲಾ ಸಂಸದರು ಬದ್ಧರಾಗಿದ್ದೇವೆ.

ಕೇಂದ್ರ ಸರ್ಕಾರ ಕೂಡ ಇಷ್ಟು ದಿನಗಳ ಕಾಲ ಆಗಿರುವ ಲೋಪದೋಷವನ್ನು ತಿದ್ದುಕೊಳ್ಳುವ ಕೆಲಸ ಮಾಡಬೇಕು. ಭದ್ರತಾ ವೈಫಲ್ಯ, ಕಾನೂನು ಸುವ್ಯವಸ್ಥೆ ಪಾಲನೆ ಆಗದೆ ಇರುವುದರಿಂದ ಈ ರೀತಿಯ ಸಮಸ್ಯೆಗಳು ಎದುರಾಗುತ್ತಿವೆ. ಈ ಬಗ್ಗೆ ಗಮನ ಹರಿಸಬೇಕು ಎಂದು ಹೇಳಿದರು.

# ಜೀವನೋಪಾಯ ಅಭಿಯಾನ ನಿರ್ದೇಶಕರ ಪ್ರವಾಸ




ಹಾಸನ: ಇತ್ತೀಚೆಗೆ ಜಿಲ್ಲೆಗೆ ಭೇಟಿ ನೀಡಿದ್ದ ರಾಷ್ಟ್ರೀಯ ಜೀವನೋಪಾಯ ಅಭಿಯಾನ ನಿರ್ದೇಶಕಿ ಪಿ.ಐ. ಶ್ರೀವಿದ್ಯಾ ಅವರು ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಆಲೂರು ತಾಲ್ಲೂಕಿನ ಮಲ್ಲಾಪುರ ಒಕ್ಕೂಟಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲಿಸಿದರು. ಬೇಲೂರು ತಾಲ್ಲೂಕು ಪಂಚಾಯಿತಿಯಿಂದ ಅಂಗಡಿಹಳ್ಳಿಯಲ್ಲಿ ತೆರೆದಿರುವ ಶ್ರೀ ಚಾಮುಂಡಿ ಸಂಜೀವಿನಿ ವನ-ಧನ ವಿಕಾಸ ಕೇಂದ್ರಕ್ಕೆ ಚಾಲನೆ ನೀಡಿದರು. ಯೋಜನೆ ಅನುಷ್ಠಾನ ಮತ್ತು ಅದರಿಂದಾಗುವ ಉಪಯೋಗಗಳ ಬಗ್ಗೆ ವಿಡಿವಿಕೆ ಸದಸ್ಯರೊಂದಿಗೆ ಸಂವಾದ ನಡೆಸಿದರು. ಯೋಜನಾ ನಿರ್ದೇಶಕ ವೈ.ಎನ್. ಚಂದ್ರಮೌಳಿ, ಸಹಾಯಕ ಯೋಜನಾ ಅಧಿಕಾರಿ ಎ.ಎಸ್. ಸುನಿತಾ, ಬೇಲೂರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹೆಚ್.ವಿ. ವಸಂತ್ ಕುಮಾರ್, ಪ್ರಕೃತಿ, ವೀಣಾ, ವಿಜಯ್, ಕಿಶೋರ್, ಕುನ್ನಿಸ್, ಸಾಜನ್, ಕೆ. ದೇವರಾಜ, ವೇಣುಗೋಪಾಲ್ ಹಾಗೂ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಮೇ -8

ಅಂತಾರಾಷ್ಟ್ರೀಯ ರೆಡ್ ಕ್ರಾಸ್ ದಿನ: ರೆಡ್ ಕ್ರಾಸ್ ಸಂಸ್ಥೆಯ ಮಾನವೀಯ ಕಾರ್ಯಗಳನ್ನು ಸ್ಮರಿಸಲಾಗುತ್ತದೆ.

**1857:** ಪ್ರಥಮ ಸ್ವಾತಂತ್ರ್ಯ ಸಂಗ್ರಾಮದ ಆರಂಭಕ್ಕೆ ಸಮೀಪ: ಮೇ 10ರ 1857 ರಂದು ಮೀರತ್‌ನಲ್ಲಿ ಆರಂಭವಾದ ಭಾರತದ ಮೊದಲ ಸ್ವಾತಂತ್ರ್ಯ ಸಂಗ್ರಾಮಕ್ಕೆ ಮುಂಚಿನ ದಿನಗಳಲ್ಲಿ ಮೇ 8ರ ಸುಮಾರಿಗೆ ಸೈನಿಕರಲ್ಲಿ ಅಸಮಾಧಾನ ಮತ್ತು ಒಡಕುಗಳ ಸಂಕೇತಗಳು ಗೋಚರಿಸಿದವು. ಮಂಗಲ್ ಪಾಂಡೆಯಂತಹ ಸೈನಿಕರ ಕ್ರಾಂತಿಕಾರಿ ಚಟುವಟಿಕೆಗಳು ಈ ಸಮಯದಲ್ಲಿ ಚರ್ಚೆಯಲ್ಲಿದ್ದವು.

**1945:** ದ್ವಿತೀಯ ವಿಶ್ವಯುದ್ಧದ ಅಂತ್ಯ: ಭಾರತವು ಬ್ರಿಟಿಷ್ ಆಡಳಿತದ ಭಾಗವಾಗಿದ್ದಾಗ ಯುರೋಪ್‌ನಲ್ಲಿ ದ್ವಿತೀಯ ವಿಶ್ವ ಯುದ್ಧದ ಅಂತ್ಯವನ್ನು ಘೋಷಿಸಲಾಯಿತು.

**1996:** ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿಯನ್ನು ಘೋಷಿಸಲಾಯಿತು.

ಜನನ

**1928:** ಶಂಕರ ಮೊಕಾಶಿ ಪುಣೇಕರ, ಕನ್ನಡದ ಪ್ರಸಿದ್ಧ ಸಾಹಿತಿ. ಅವರ ಕಾದಂಬರಿ ಮತ್ತು ಕೃತಿಗಳು ಕನ್ನಡ ಸಾಹಿತ್ಯದಲ್ಲಿ ಮಹತ್ವದ ಸ್ಥಾನ ಪಡೆದಿವೆ.

**1965:** ಶೈನಿ ವಿಲ್ಸನ್ (ಶೈನಿ ಎಬ್ರಹಾಂ), ಭಾರತದ ಅಥ್ಲೀಟ್, ಅವರು 1984ರ ಒಲಿಂಪಿಕ್ಸ್‌ನಲ್ಲಿ ಭಾರತವನ್ನು ಪ್ರತಿನಿಧಿಸಿದರು ಮತ್ತು ಏಷ್ಯನ್ ಗೇಮ್ಸ್‌ನಲ್ಲಿ ಪದಕ ಗೆದ್ದರು.

**1916:** ಸ್ವಾಮಿ ಚಿನ್ಮಯಾನಂದ ಸರಸ್ವತಿ, ಚಿನ್ಮಯ ಮಿಷನ್‌ನ ಸಂಸ್ಥಾಪಕ. ವೇದಾಂತವನ್ನು ಸರಳವಾಗಿ ಜನರಿಗೆ ತಲುಪಿಸಿದ ಆಧ್ಯಾತ್ಮಿಕ ಗುರು.

# ಆನೆಮಹಲ್ ಗ್ರಾ.ಪಂ ವಿರುದ್ಧ ಸುಳ್ಳು ಆರೋಪ: ಆಕ್ರೋಶ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಆನೆಮಹಲ್ ಗ್ರಾಮ ಪಂಚಾಯಿತಿ ಮತ್ತು ಕೌಡಹಳ್ಳಿ ಗ್ರಾಮದ ವಿರುದ್ಧ ಕಿಡಿಗೇಡಿಗಳು ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಸುದ್ದಿ ಹರಡುವ ಮೂಲಕ ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದ್ದಾರೆ ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ತಿಮ್ಮಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಸಾಮಾಜಿಕ ಜಾಲತಾಣದಲ್ಲಿ ಆನೆಮಹಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೌಡಹಳ್ಳಿ ಮತ್ತು ಸಕಲೇಶಪುರ ಗ್ರಾಮಾಂತರ ಗ್ರಾಮಗಳಲ್ಲಿ ಕಲುಷಿತ ನೀರು ಸರಬರಾಜಾಗುತ್ತಿದೆ ಎಂದು ಕೆಲವರು ಸುಳ್ಳು ಹೇಳಿಕೆ ನೀಡಿದ್ದಾರೆ. ಈ ಆರೋಪ ಮಾಡಿರುವವರು ಗ್ರಾಮ ಪಂಚಾಯಿತಿಯಿಂದ ನೀರಿನ ಸಂಪರ್ಕವನ್ನೇ ಪಡೆದಿಲ್ಲ ಎಂದು ಸ್ಪಷ್ಟಪಡಿಸಿದರು.

ಆನೆಮಹಲ್ ಗ್ರಾಮ ಪಂಚಾಯಿತಿಯ ಶೇ. 80ರಷ್ಟು ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ.




ಇದಕ್ಕಾಗಿ ಪ್ರತ್ಯೇಕ ಕೊಳವೆ ಬಾವಿಗಳಿಂದ ನೀರನ್ನು ಪೂರೈಸಲಾಗುತ್ತಿದೆ. ಸಾಮಾಜಿಕ ಜಾಲತಾಣದಲ್ಲಿ ಕಿಡಿಗೇಡಿಗಳು ತೋರಿಸಿರುವ ಬಾವಿಯ ನೀರನ್ನು ಕುಡಿಯುವ ಉದ್ದೇಶಕ್ಕೆ ಬಳಸಲಾಗುತ್ತಿಲ್ಲ ಎಂದು ಹೇಳಿದರು.


ಗ್ರಾಮ ಪಂಚಾಯಿತಿಯಲ್ಲಿ ನಾಲ್ಕು ಕುಡಿಯುವ ನೀರಿನ ಮೋಟಾರ್ ಗಳಿದ್ದು, ಎಲ್ಲವೂ ಸುಸ್ಥಿತಿಯಲ್ಲಿವೆ. ಈ ಕೊಳವೆ ಬಾವಿಗಳ ನೀರನ್ನು ಕುಡಿಯಲು ಬಳಸಲಾಗುತ್ತಿದೆ. ಪ್ರಸ್ತುತ ಆಡಳಿತ ಮಂಡಳಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಸಮಗ್ರ ಕುಡಿಯುವ ನೀರು ಯೋಜನೆಯನ್ನು ಉತ್ಸಾಹದಿಂದ ಅನುಷ್ಠಾನಗೊಳಿಸುತ್ತಿದ್ದಾರೆ. ಈ ಯೋಜನೆ ಬಹುತೇಕ ಪೂರ್ಣಗೊಂಡಿದ್ದು, ಮುಂದಿನ ದಿನಗಳಲ್ಲಿ ಕೌಡಹಳ್ಳಿ ಮತ್ತು ಸಕಲೇಶಪುರ ಗ್ರಾಮಾಂತರ ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರು ಸಮೃದ್ಧವಾಗಿ ದೊರೆಯಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯಿತಿಯ ಉತ್ತಮ ಕಾರ್ಯಗಳ ವಿರುದ್ಧ ಸುಳ್ಳು ಸುದ್ದಿ ಹರಡಿರುವವರ ವಿರುದ್ಧ ಗ್ರಾಮಸ್ಥರು ಮತ್ತು ವಿವಿಧ ದಲಿತ ಸಂಘಟನೆಗಳ ಒಕ್ಕೂಟವು ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು.

ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ ಅಶ್ರಫ್ ಮಾತನಾಡಿ, ಬೇಸಿಗೆ ಕಾಲದಿಂದಾಗಿ ಕುಡಿಯುವ ನೀರನ್ನು ಎರಡು ದಿನಕ್ಕೊಮ್ಮೆ ಸರಬರಾಜು ಮಾಡಲಾಗುತ್ತಿದೆ. ಇತರ ತಿಂಗಳುಗಳಲ್ಲಿ ಪ್ರತಿದಿನ ಪ್ರತಿ ವಾರ್ಡ್‌ಗೆ ನೀರು ಪೂರೈಕೆಯಾಗುತ್ತಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಹುತೇಕ ಎಲ್ಲಾ ಮನೆಗಳಿಗೆ ಶುದ್ಧ ಕುಡಿಯುವ ನೀರು ತಲುಪುತ್ತಿದೆ. ಆದರೆ, ಕೆಲವು ಕಿಡಿಗೇಡಿಗಳು ಗ್ರಾಮ ಪಂಚಾಯಿತಿ ಮತ್ತು ಜನಪ್ರತಿನಿಧಿಗಳಿಗೆ ಕೆಟ್ಟ ಹೆಸರು ತರಲು, ದನದ ಕೊಟ್ಟಿಗೆಯಿಂದ ತಂದ ಕಲುಷಿತ ನೀರಿನ ಚಿತ್ರವನ್ನು ಸಾಮಾಜಿಕ ಜಾಲತಾಣದಲ್ಲಿ ಹಾಕಿ ಸುಳ್ಳು ಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ವಾರ್ಡ್‌ನಲ್ಲಿ ಶುದ್ಧ ಕುಡಿಯುವ ನೀರು ಸಿಗದಿದ್ದರೆ, ಸದಸ್ಯರು ಅಥವಾ ಪಿಡಿಒಗೆ ದೂರು ನೀಡಿದರೆ ತಕ್ಷಣ ಸಮಸ್ಯೆಯನ್ನು ಸರಿಪಡಿಸಲಾಗುತ್ತದೆ. ಆದರೆ, ಸದರಿ ವ್ಯಕ್ತಿಯು ಯಾವುದೇ ದೂರು ನೀಡದೆ ಸಾಮಾಜಿಕ ಜಾಲತಾಣದಲ್ಲಿ ಸುಳ್ಳು ಹರಡುತ್ತಿದ್ದಾರೆ. ಈ ಕೃತ್ಯವನ್ನು ಕೂಡಲೇ ನಿಲ್ಲಿಸದಿದ್ದರೆ, ಆ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಮಾ ದೇವರಾಜ್, ಉಪಾಧ್ಯಕ್ಷ ವಿರೂಪಾಕ್ಷ, ಮಾಜಿ ಉಪಾಧ್ಯಕ್ಷೆ ಚಂದ್ರಾವತಿ ಹಾಜರಿದ್ದರು.

# ನುಗ್ಗೇಹಳ್ಳಿ ಪಿಎಸಿಸಿಎಸ್‌ಗೆ ವಿಕ್ಟರ್ ಅವಿರೋಧ ಆಯ್ಕೆ




ಚನ್ನರಾಯಪಟ್ಟಣ: ತಾಲ್ಲೂಕಿನ ನುಗ್ಗೇಹಳ್ಳಿ ಹೋಬಳಿ ಕೇಂದ್ರದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಎಂ. ದಾಸಪುರ ಗ್ರಾಮದ ವಿಕ್ಟರ್ ಅವಿರೋಧ ಆಯ್ಕೆಯಾದರು.

ಇತ್ತೀಚೆಗೆ ಈ ಹಿಂದೆ ಅಧ್ಯಕ್ಷರಾಗಿದ್ದ ಹುಲಿಕೆರೆ ಸಂಪತ್ ಕುಮಾರ್ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಡೆಯಿತು. ವಿಕ್ಟರ್ ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದೆ ಇದ್ದುದರಿಂದ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ವಿಜಯೇಂದ್ರ ಘೋಷಿಸಿದರು.

ವಿಕ್ಟರ್ ಮಾತನಾಡಿ, ಕ್ಷೇತ್ರದ ಶಾಸಕರು ಹಾಗೂ ಜಿಲ್ಲಾ ಬ್ಯಾಂಕ್‌ನ ನಿರ್ದೇಶಕ ಸಿ.ಎನ್. ಬಾಲಕೃಷ್ಣ ಅವರ ಹೆಚ್ಚಿನ ಸಹಕಾರ ಪಡೆದು ಕೃಷಿ ಪತ್ತಿನ ವ್ಯಾಪ್ತಿಯ ಶೇರುದಾರ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ ಸಾಲ ಕೊಡಿಸಲು ಪ್ರಯತ್ನಿಸುವುದಾಗಿ ತಿಳಿಸಿದರು. ಉಪಾಧ್ಯಕ್ಷ ಚಂದ್ರಣ್ಣ, ಸಂಘದ ನಿರ್ದೇಶಕರಾದ ದೊರೆಸ್ವಾಮಿ, ಕೃಷ್ಣೇಗೌಡ, ಎಚ್.ಬಿ. ರಂಗಸ್ವಾಮಿ, ಪಟೇಲ್ ಕುಮಾರ್, ಗೌರಮ್ಮ ತೋಪೇಗೌಡ, ಕಾರೆಕೆರೆ ಪ್ರಕಾಶ್, ಕೋಮಲ ಕುಮಾರಸ್ವಾಮಿ, ಮಹೇಶ್, ಅಕ್ಕನಹಳ್ಳಿ ಕೃಷಿ ಪತ್ತಿನ ಅಧ್ಯಕ್ಷ ಮಧು, ಗ್ರಾಮ ಪಂಚಾಯಿತಿ ಸದಸ್ಯರಾದ ಹೊನ್ನೇಗೌಡ, ಮಂಜುನಾಥ್ ಇತರರಿದ್ದರು.

# ಸದೃಢ ಆರೋಗ್ಯಕ್ಕೆ ಜೀವನ ಶೈಲಿ ಬದಲಾಗಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಗೋಮತಿ ಕಲ್ಯಾಣ ಮಂಟಪದಲ್ಲಿ ಪತಂಜಲಿ ಯೋಗ ಪರಿವಾರದಿಂದ ಹಮ್ಮಿಕೊಂಡಿದ್ದ ಮೂರು ದಿನಗಳ ಯೋಗ, ಧ್ಯಾನ ಪ್ರಾಣಾಯಮ ಶಿಬಿರಕ್ಕೆ ಬುಧವಾರ ತೆರೆ ಬಿದ್ದಿತು.

ಪ್ರತಿದಿನ ಬೆಳಿಗ್ಗೆ 5.30 ರಿಂದ 7ರ ವರೆಗೆ ನಡೆಯುತ್ತಿದ್ದ ಯೋಗ ಶಿಬಿರಕ್ಕೆ ನೂರಾರು ಜನರು ಭಾಗಿಯಾದರು. ಹರಿದ್ವಾರ ಪತಂಜಲಿ ಯೋಗ ಪೀಠದ ಮುಖ್ಯ ಕೇಂದ್ರೀಯ ಪ್ರಭಾರಿ ಸ್ವಾಮಿ ಪರಮಾರ್ಥ ಜೀ ತರಬೇತಿ ನೀಡಿದರು.

ಈ ವೇಳೆ ಮಾತನಾಡಿದ ಅವರು, ದೇಹದ ಪ್ರತಿ ಅಂಗಾಂಗಗಳ ಆರೋಗ್ಯ ರಕ್ಷಣೆಯಲ್ಲಿ ಯೋಗ ಪ್ರಮುಖ ಪಾತ್ರ ವಹಿಸುತ್ತದೆ. ತಲೆಯಿಂದ




ಪಾದದ ವರೆಗೆ ಎಲ್ಲಾ ದೇಹ ಚಟುವಟಿಕೆಯಿಂದ ಇರಬೇಕೆಂದರೆ ಯೋಗ, ಧ್ಯಾನ ನೆರವಾಗುತ್ತದೆ. ಜೊತೆಗೆ ಪೌಷ್ಟಿಕಾಂಶಯುಕ್ತ ಆಹಾರ ಸೇವನೆ, ನಿದ್ರೆಯನ್ನು ಮಾಡಬೇಕು. ಉಗುರು ಬೆಚ್ಚಗಿನ ನೀರಿನಲ್ಲಿ ಸ್ನಾನ ಮಾಡಬೇಕು. ಹಣ್ಣು ಹಂಪಲು ಸೇವೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಪ್ರತಿದಿನ ಬೆಳಿಗ್ಗೆ ಕಾಯಿಸಿ ಆರಿಸಿದ ನೀರು ಹಾಗು ಹಸುವಿನ ತುಪ್ಪ ಸೇವನೆಯಿಂದ ದೇಹಕ್ಕೆ ಸಾಕಷ್ಟು ಪ್ರಯೋಜನಗಳಿವೆ. ಹಗಲು ಹೊತ್ತಿನಲ್ಲಿ ಮಜ್ಜಿಗೆ, ರಾತ್ರಿ ಮಲಗುವಾಗ ಹಾಲು ಸೇವಿಸಬೇಕು ಎಂದು ಹೇಳಿದರು.

ಪತಂಜಲಿ ಯೋಗ ಪರಿವಾರದ ರಾಜ್ಯ ಪ್ರಭಾರಿ ಭವರ ಲಾಲ್ ಜೀ ಆರ್ಯ, ಪರಿವಾರದ ನಿಕಟ ಪೂರ್ವ ಜಿಲ್ಲಾ ಸಂರಕ್ಷಕ ಹರಿಹರಪುರ ಶ್ರೀಧರ್, ಜಿಲ್ಲಾ ಸಂರಕ್ಷಕ ಲೋಕನಾಥ್, ಭಾರತ್ ಸ್ವಾಭಿಮಾನ್ ಟ್ರಸ್ಟ್ ಜಿಲ್ಲಾ ಪ್ರಭಾರಿ ಶೇಷಪ್ಪ, ಪತಂಜಲಿ ಯೋಗ ಸಮಿತಿ ಜಿಲ್ಲಾ ಪ್ರಭಾರಿ ಗಿರೀಶ್, ಯುವ ಭಾರತ್ ಜಿಲ್ಲಾ ಪ್ರಭಾರಿ ಸುರೇಶ್ ಪ್ರಜಾಪತಿ, ಕಿಸಾನ್ ಸೇವಾ ಸಮಿತಿ ಜಿಲ್ಲಾ ಪ್ರಭಾರಿ ನಾಗೇಶ್, ಮಹಿಳಾ ಪತಂಜಲಿ ಯೋಗ ಸಮಿತಿ ಜಿಲ್ಲಾ ಪ್ರಭಾರಿ ಶಾರದಾ ಧರ್ಮಾನಂದ್, ಗೋಮತಿ ಕಲ್ಯಾಣ ಮಂಟಪ ಮಾಲೀಕ ದಿನೇಶ್, ಬಿಜೆಪಿ ಮುಖಂಡರಾದ ವೇಣುಗೋಪಾಲ್, ಕಾಂತರಾಜು, ಸಾಧನ ಕಾಲೇಜಿನ ವಿಜಯಕುಮಾರ್, ಎಪಿಜೆ ಕಾಲೇಜಿನ ಮುರುಳಿ, ನಿಟ್ಟೂರು ಜಯರಾಮ್, ಡಾ. ಪಾಲಾಕ್ಷ ಇತರರಿದ್ದರು.

# ಮನೆ ಬೀಗ ಮುರಿದು ಚಿನ್ನಾಭರಣ ಕಳವು

ಚನ್ನರಾಯಪಟ್ಟಣ: ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಒಳನುಗ್ಗಿರುವ ಕಳ್ಳರು ನಗದು ಸೇರಿ 10.50 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಮತಿಘಟ್ಟ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಸುಜಾತ ಅನಾರೋಗ್ಯ ಹಿನ್ನೆಲೆಯಲ್ಲಿ ಮೇ 1 ರಂದು ಮನೆಗೆ ಬೀಗ ಹಾಕಿ ಚನ್ನರಾಯಪಟ್ಟಣದ ತಮ್ಮ ಮಗಳ ಮನೆಗೆ ತೆರಳಿದ್ದರು. ಮೇ 5 ರಂದು ವಾಪಾಸ್ ಬಂದು ನೋಡಿದಾಗ ಮನೆ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಬಲವಾದ ಆಯುಧದಿಂದ ಬಾಗಿಲು ಮುರಿದು ಪ್ರವೇಶಿಸಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 4.50 ಲಕ್ಷ ರೂ. ನಗದು, 50 ಗ್ರಾಂ ತೂಕದ ಚಿನ್ನದ ಸರ, 20 ಗ್ರಾಂ ತೂಕದ ಚಿನ್ನದ 4 ಬಳೆ, 25 ಗ್ರಾಂ ತೂಕದ ಚಿನ್ನದ ನೆಕ್ಲೆಸ್, 10 ಗ್ರಾಂ ತೂಕದ ಎರಡು ಜೊತೆ ಚಿನ್ನದ ಓಲೆ, 25 ಗ್ರಾಂ ತೂಕದ ಚಿನ್ನದ ಓಲೆ ಜುಮುಕಿ, 10 ಗ್ರಾಂ ತೂಕದ ಎರಡು ಚಿನ್ನದ ಉಂಗುರ ಕಳವು ಮಾಡಿದ್ದಾರೆ. ಕಳುವಾದ ಚಿನ್ನಾಭರಣದ ಒಟ್ಟು ಮೌಲ್ಯ 6 ಲಕ್ಷ ರೂ. ಆಗಿದೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248